# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 334 |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 03-02-2021. (ಕಂದಾಯ ಇಲಾಖೆಯಿಂದ ವರ್ಗಾವಣೆಯಾದ ಪ್ರಶ್ನೆ) |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1. | ಭೂ-ಪರಿವರ್ತನೆಯಾದ ಜಾಗವನ್ನು ನಮೂನೆ-11 ಬಿ ಮೂಲಕ ಖರೀದಿಸಿದ್ದರೂ ನಮೂನೆ-9 ಹಾಗೂ 11-ಎ ನೀಡುವುದನ್ನು ರಾಜ್ಯದಲ್ಲಿ ಸ್ಥಗಿತಗೊಳಿಸಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ-9 ಮತ್ತು 11ಎ ವಿತರಿಸುತ್ತಾರೆ.<br><br>ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11ಬಿ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ 11ಬಿ ವಿತರಿಸುತ್ತಾರೆ.<br><br>ಕ್ರಮಬದ್ಧವಲ್ಲದ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ-11ಬಿ ಪಡೆದಿರುವ ಆಸ್ತಿಯ ಮಾಲೀಕರು ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಗೆ ಸಂಬಂಧಿಸಿದ ಭೂ ಪರಿವರ್ತನೆ ಆದೇಶ ಮತ್ತು ಸಕ್ಷಮ ಪ್ರಾಧಿಕಾರದಿಂದ ಅಂದರೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ನಗರಾಭಿವೃದ್ಧಿ ಪ್ರಾಧಿಕಾರ / ಯೋಜನಾ ಪ್ರಾಧಿಕಾರಿಗಳಿಂದ ಅನುಮೋದನೆ ಪಡೆದ ವಿನ್ಯಾಸ ನಕ್ಷೆ (ಲೇಔಟ್ ಪ್ಲಾನ್) ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ-9 ಮತ್ತು 11ಎ ವಿತರಿಸುತ್ತಾರೆ. |
| 2. | ಬಂದಿದ್ದಲ್ಲಿ, ನಿಯಮಾವಳಿಯಂತೆ ಸ್ಟ್ಯಾಂಪ್ ಶುಲ್ಕ ಇತ್ಯಾದಿಗಳನ್ನು ಭೂ-ಪರಿವರ್ತಿತ ಜಾಗವನ್ನು 11-ಬಿ ಮೂಲಕ ಖರೀದಿಸಿದವರಿಗೆ ನಮೂನೆ-9 ಹಾಗೂ 11-ಎ ನೀಡಲು ಯಾವ ಕ್ರಮ ವಹಿಸಲಾಗಿದೆ. | |
| 3. | ಇಲ್ಲವಾದಲ್ಲಿ ನಮೂನೆ-9 ಹಾಗೂ 11-ಎ ನ್ನು ನೀಡಲು ಯಾವಾಗ ಕ್ರಮ ವಹಿಸಲಾಗುವುದು? | |

ಸಂ. ಗ್ರಾಅಪ 65 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು